ಕರ್ನಾಟಕ ಸರ್ಕಾರದ ನಡವಳಿಗಳು

ವಿಷಯ: ಕರ್ನಾಟಕ ರಾಜ್ಯದ ಪರಿಶಿಷ್ಟ ಜಾತಿಗಳಿಗೆ ಶಿಕ್ಷಣ ಮತ್ತು ಉದ್ಯೋಗದಲ್ಲಿ ಒಳಮೀಸಲಾತಿ (ವರ್ಗೀಕರಣ) ಕಲ್ಪಿಸುವ ಬಗ್ಗೆ

ಪ್ರಸ್ತಾವನೆ:

1. ಕರ್ನಾಟಕ ಸರ್ಕಾರವು ಮಾನ್ಯ ಸರ್ವೋಚ್ಚ ನ್ಯಾಯಾಲಯವು CA No 2317 ರಲ್ಲಿ ಮಾನ್ಯ ಸರ್ವೋಚ್ಚ ನ್ಯಾಯಾಲಯವು ಪಂಜಾಬ್ ರಾಜ್ಯ ಮತ್ತು ಇತರರು Vs ದೇವಿಂದರ್ ಸಿಂಗ್ ಪ್ರಕರಣದಲ್ಲಿ ನೀಡಿರುವ ತೀರ್ಪಿನ ಅನ್ವಯ ಪರಿಶಿಷ್ಟ ಜಾತಿಗಳ ಒಳಮೀಸಲಾತಿ (ವರ್ಗೀಕರಣ) ಬಗ್ಗೆ ಅಧ್ಯಯನ ನಡೆಸಿ ವರದಿ ಸಲ್ಲಿಸಲು ಆಯೋಗ ವಿಚಾರಣಾ ಕಾಯ್ದೆ 1952 ರಂತೆ ನಿವೃತ್ತ ನ್ಯಾಯಮೂರ್ತಿ ಹೆಚ್.ಎನ್. ನಾಗಮೋಹನ್ ದಾಸ್ ಇವರ ನೇತೃತ್ವದ ಏಕ ಸದಸ್ಯ ಆಯೋಗವನ್ನು ಸರ್ಕಾರದ ಆದೇಶ ಸಂಖ್ಯೆ : SWD/SLP/8 2024(P-1), ದಿನಾಂಕ: 12-11-2024 ಮತ್ತು ದಿನಾಂಕ: 03-12-2024 ರಂತೆ ರಚಿಸಿ ಆದೇಶಿಸಲಾಗಿದೆ. ಅದರಂತೆ, ಸದರಿ ಆಯೋಗವು ದಿನಾಂಕ: 04-08-2025 ರಂದು ಸರ್ಕಾರಕ್ಕೆ ವರದಿಯನ್ನು ಸಲ್ಲಿಸಿದೆ. ಆಯೋಗವು ಪರಿಶಿಷ್ಟ ಜಾತಿಗಳನ್ನು ಪ್ರವರ್ಗ ಎ, ಬಿ, ಸಿ, ಡಿ ಮತ್ತು ಇ ಎಂದು 5 ಗುಂಪುಗಳಾಗಿ ವರ್ಗೀಕರಿಸಿದ್ದು, ಸದರಿ ಆಯೋಗದ ವರದಿಯನ್ನು ಪರಿಶೀಲಿಸಿ, ಸೂಕ್ತ ನಿರ್ಧಾರಕ್ಕಾಗಿ, ಸಚಿವ ಸಂಪುಟದ ಮುಂದೆ ಮಂಡಿಸಲಾಗಿದೆ. ಕರ್ನಾಟಕ ರಾಜ್ಯದ ಪರಿಶಿಷ್ಟ ಜಾತಿಯಲ್ಲಿ ಒಳಮೀಸಲಾತಿ/ವರ್ಗೀಕರಣದ ಬಗ್ಗೆ ನ್ಯಾಯಮೂರ್ತಿ ಡಾ: ಹೆಚ್.ಎನ್. ನಾಗಮೋಹನ್ ದಾಸ್ ಆಯೋಗವು ನೀಡಿರುವ ವರದಿಯನ್ನು ಕೂಲಂಕುಷವಾಗಿ ಚರ್ಚಿಸಿ, ಕೆಲವು ಮಾರ್ಪಾಡುಗಳೊಂದಿಗೆ ಸದರಿ ವರದಿಯನ್ನು ಸಚಿವ ಸಂಪುಟವು ಒಪ್ಪಿರುತ್ತದೆ. ಈ ಹಿನ್ನೆಲೆಯಲ್ಲಿ ಈ ಕೆಳಕಂಡಂತೆ ಆದೇಶಿಸಿದೆ.

ಸರ್ಕಾರದ ಆದೇಶ ಸಂಖ್ಯೆ: ಸಕಇ 8 ಎಸ್‌ಎಲ್‌ಪಿ 2024,
ಬೆಂಗಳೂರು ದಿನಾಂಕ: 25-8-2025

1) ಪ್ರಸ್ತಾವನೆಯಲ್ಲಿ ವಿವರಿಸಿರುವ ಅಂಶಗಳ ಹಿನ್ನೆಲೆಯಲ್ಲಿ ನ್ಯಾಯಮೂರ್ತಿ ಹೆಚ್.ಎನ್. ನಾಗಮೋಹನ್ ದಾಸ್ ಆಯೋಗದ ವರದಿಯನ್ನು ಅಗತ್ಯ ಮಾರ್ಪಾಡುಗಳೊಂದಿಗೆ ಅಂಗೀಕರಿಸಿ, ಪರಿಶಿಷ್ಟ ಜಾತಿಯಲ್ಲಿರುವ 101 ಜಾತಿಗಳನ್ನು 5 ಪ್ರವರ್ಗಗಳ ಬದಲಾಗಿ ಪ್ರವರ್ಗ- ಎ, ಪ್ರವರ್ಗ-ಬಿ ಮತ್ತು ಪ್ರವರ್ಗ-ಸಿ ಎಂದು 3 ಪ್ರವರ್ಗಳಾಗಿ ವರ್ಗೀಕರಿಸಿ ಶಿಕ್ಷಣ ಮತ್ತು ಉದ್ಯೋಗದಲ್ಲಿ ಪ್ರಸ್ತುತ ಜಾರಿಯಲ್ಲಿರುವ ಶೇ.17% ಮೀಸಲಾತಿಯನ್ನು ಪ್ರವರ್ಗ- ಎ ರಲ್ಲಿನ ಸಮುದಾಯಗಳಿಗೆ ಶೇ.6%, ಪ್ರವರ್ಗ-ಬಿ ರಲ್ಲಿನ ಸಮುದಾಯಗಳಿಗೆ ಶೇ. 6% ಮತ್ತು ಪ್ರವರ್ಗ –ಸಿ ರಲ್ಲಿನ ಸಮುದಾಯಗಳಿಗೆ ಶೇ.5% ರಷ್ಟು ನಿಗಧಿಪಡಿಸಿ, ತಕ್ಷಣದಿಂದ ಜಾರಿಗೆ ಬರುವಂತೆ ಆದೇಶಿಸಿದೆ. (ವಿವರಗಳನ್ನು ಅನುಬಂಧ-1, 2 ಮತ್ತು 3 ರಲ್ಲಿ ನೀಡಲಾಗಿದೆ.)
2) ಆಯೋಗದ ವರದಿಯಲ್ಲಿನ ಪ್ರವರ್ಗ- ಇ ರಲ್ಲಿನ ಆದಿ ಕರ್ನಾಟಕ, ಆದಿ ದ್ರಾವಿಡ ಮತ್ತು ಆದಿ ಆಂಧ್ರ ಈ 3 ಸಮುದಾಯಗಳು ತಮ್ಮ ಮೂಲ ಜಾತಿಯನ್ನು ತಿಳಿಸದೇ ಇರುವುದರಿಂದ ಸದರಿ 3 ಜಾತಿಗಳು ಅನುಬಂಧಗಳಲ್ಲಿರುವ ಪ್ರವರ್ಗ-ಎ ಅಥವಾ ಪ್ರವರ್ಗ-ಬಿ ಗಳಲ್ಲಿ ಮೀಸಲಾತಿ ಸೌಲಭ್ಯವನ್ನು ಪಡೆಯಬಹುದು.

ಎಸ್.ವಿ
25/08/2025

Scanned with OKEN Scanner

3) ರಾಜ್ಯ ಸಿವಿಲ್ ಸೇವೆಗಳ ಹುದ್ದೆಗಳಿಗೆ ಒಳಮೀಸಲಾತಿ ಹಿನ್ನೆಲೆಯಲ್ಲಿ ತಡೆಹಿಡಿಯಲಾದ ನೇರ ನೇಮಕಾತಿ ಪ್ರಕ್ರಿಯೆಯನ್ನು ಪ್ರಾರಂಭಿಸಲು ಸಿಬ್ಬಂದಿ ಮತ್ತು ಆಡಳಿತ ಸುಧಾರಣೆ ಇಲಾಖೆಯಿಂದ ಕ್ರಮವಹಿಸುವುದು. ಎಲ್ಲಾ ಇಲಾಖೆಗಳು ಮತ್ತು ಅವುಗಳ ಅಧೀನದ ಎಲ್ಲಾ ನಿಗಮ/ಮಂಡಳಿ/ಸಂಸ್ಥೆಗಳಲ್ಲಿ ಮುಂಬಡ್ತಿ ಪ್ರಕ್ರಿಯೆಯನ್ನೂ ಸಹ ಮುಂದುವರೆಸಬಹುದಾಗಿದೆ.
4) ಉದ್ಯೋಗಳ ನೇಮಕಾತಿಯಲ್ಲಿ ಹಾಜರಾಗುವ ಎಲ್ಲಾ ಅಭ್ಯರ್ಥಿಗಳಿಗೆ ಆಯಾ ನೇಮಕಾತಿಗಳಿಗೆ ನಿಗದಿಪಡಿಸಿರುವ ಗರಿಷ್ಟ ವಯೋಮಿತಿಯಲ್ಲಿ ಸಡಿಲಿಕೆ ನೀಡಲು ತೀರ್ಮಾನಿಸಲಾಗಿದ್ದು, ಈ ಬಗ್ಗೆ ಪ್ರತ್ಯೇಕವಾಗಿ ಆದೇಶ ಹೊರಡಿಸಲು ಸಿಬ್ಬಂದಿ ಮತ್ತು ಆಡಳಿತ ಸುಧಾರಣೆ ಇಲಾಖೆಯು ಅಗತ್ಯ ಕ್ರಮವಹಿಸುವುದು.
5) ಹೊಸ ದತ್ತಾಂಶ ಅಥವಾ ಮಾಹಿತಿ ಬಂದಾಗ ಅಗತ್ಯ ಮಾರ್ಪಾಡುಗಳನ್ನು ಮಾಡಲು ಕರ್ನಾಟಕ ರಾಜ್ಯ ಅನುಸೂಚಿತ ಜಾತಿಗಳು ಮತ್ತು ಅನುಸೂಚಿತ ಬುಡಕಟ್ಟುಗಳ ಆಯೋಗಕ್ಕೆ ಅಧಿಕಾರ ನೀಡುವ ಬಗ್ಗೆ ಕರ್ನಾಟಕ ರಾಜ್ಯ ಅನುಸೂಚಿತ ಜಾತಿಗಳು ಮತ್ತು ಅನುಸೂಚಿತ ಬುಡಕಟ್ಟುಗಳ ಆಯೋಗ ಅಧಿನಿಯಮ, 2002ಕ್ಕೆ ಸೂಕ್ತ ತಿದ್ದುಪಡಿ ಮಾಡಲಾಗುವುದು.
6) ಪರಿಶಿಷ್ಟ ಜಾತಿಗಳಲ್ಲಿನ ಚಲನಶೀಲತೆಯನ್ನು ಹಾಗೂ ಲಭ್ಯವಾಗುವ ದತ್ತಾಂಶಗಳನ್ನು ಪರಿಶೀಲಿಸಿಕೊಂಡು, ಕಾಲಕಾಲಕ್ಕೆ ಈ ಜಾತಿಗಳನ್ನು ಅಧ್ಯಯನ ಮಾಡಿ, ವರದಿ ನೀಡಲು ಶಾಶ್ವತ ಪರಿಶಿಷ್ಟ ಜಾತಿಗಳ ಆಯೋಗವನ್ನು ರಚಿಸಲಾಗುವುದು.
7) ಒಳ ಮೀಸಲಾತಿ ಹೋರಾಟಗಾರರ ಮೇಲಿನ ಮೊಕದ್ದಮೆಗಳನ್ನು ಹಿಂಪಡೆಯಲು ನಿರ್ಧರಿಸಲಾಗಿದ್ದು, ರಾಜ್ಯದ ವಿವಿಧ ನ್ಯಾಯಾಲಯಗಳಲ್ಲಿ ವಿಚಾರಣೆಯಲ್ಲಿರುವ ಅಪರಾಧ ಪ್ರಕರಣಗಳ ಕುರಿತು ಪರಿಶೀಲಿಸಿ ತುರ್ತಾಗಿ ಸರ್ಕಾರಕ್ಕೆ ಶಿಫಾರಸ್ಸು ಮಾಡುವ ಬಗ್ಗೆ ಸದರಿ ವಿಷಯಕ್ಕೆ ಸಂಬಂಧಿಸಿದ ಸಚಿವ ಸಂಪುಟ ಉಪಸಮಿತಿಯು ಕ್ರಮವಹಿಸುವುದು. (ಗೃಹ ಇಲಾಖೆ ಈ ಬಗ್ಗೆ ಅಗತ್ಯ ಕ್ರಮ ತೆಗೆದುಕೊಳ್ಳುವುದು)

ಮೇಲ್ಕಂಡ ಆದೇಶವನ್ನು ಸಚಿವ ಸಂಪುಟ ಪ್ರಕರಣ ಸಂಖ್ಯೆ: ಸಿ658/2025, ದಿನಾಂಕ: 19-08-2025ರನ್ವಯ ಹೊರಡಿಸಲಾಗಿದೆ.

ಕರ್ನಾಟಕ ರಾಜ್ಯಪಾಲರ ಆಜ್ಞಾನುಸಾರ
ಮತ್ತು ಅವರ ಹೆಸರಿನಲ್ಲಿ

(ಎಸ್.ವಿ.ಕಲಾವತಿ) 25/08/2025
ಸರ್ಕಾರದ ಜಂಟಿ ಕಾರ್ಯದರ್ಶಿ
ಸಮಾಜ ಕಲ್ಯಾಣ ಇಲಾಖೆ

ಇವರಿಗೆ:

1. ಮಹಾಲೇಖಪಾಲರು, (ಎ&ಇ, ಲೆಕ್ಕಪರಿಶೋಧನೆ-1 ಮತ್ತು 2), ಕರ್ನಾಟಕ, ಬೆಂಗಳೂರು.
2. ಸರ್ಕಾರದ ಅಪರ ಮುಖ್ಯ ಕಾರ್ಯದರ್ಶಿಗಳು, ಒಳಾಡಳಿತ ಇಲಾಖೆ, ವಿಧಾನಸೌಧ, ಬೆಂಗಳೂರು
3. ಪೊಲೀಸ್ ಮಹಾನಿರ್ದೇಶಕರು ಹಾಗೂ ಆರಕ್ಷಕ ಮಹಾನಿರೀಕ್ಷಕರು, ಕರ್ನಾಟಕ, ನೃಪತುಂಗ ರಸ್ತೆ, ಬೆಂಗಳೂರು
4. ಸರ್ಕಾರದ ಕಾರ್ಯದರ್ಶಿ, ಸಿಬ್ಬಂದಿ ಮತ್ತು ಆಡಳಿತ ಸುಧಾರಣೆ ಇಲಾಖೆ, ವಿಧಾನಸೌಧ, ಬೆಂಗಳೂರು
5. ಎಲ್ಲಾ ಸರ್ಕಾರದ ಅಪರ ಮುಖ್ಯ ಕಾರ್ಯದರ್ಶಿಗಳು/ಪ್ರಧಾನ ಕಾರ್ಯದರ್ಶಿಗಳು/ಕಾರ್ಯದರ್ಶಿಗಳು
6. ಕಾರ್ಯದರ್ಶಿ, ಕರ್ನಾಟಕ ಲೋಕಸೇವಾ ಆಯೋಗ, ಉದ್ಯೋಗಸೌಧ, ಬೆಂಗಳೂರು

Scanned with OKEN Scanner

7. ಎಲ್ಲಾ ಇಲಾಖಾ ಮುಖ್ಯಸ್ಥರುಗಳು/ನಿಗಮ/ಮಂಡಳಿ/ಶೈಕ್ಷಣಿಕ ಸಂಸ್ಥೆಗಳು/ವಿಶ್ವವಿದ್ಯಾಲಯಗಳು /ಇತರೆ ಎಲ್ಲಾ ಸರ್ಕಾರಿ ಸಂಸ್ಥೆಗಳು
8. ಎಲ್ಲಾ ಜಿಲ್ಲಾಧಿಕಾರಿಗಳು/ಮುಖ್ಯ ಕಾರ್ಯನಿರ್ವಹಣಾಧಿಕಾರಿಗಳು, ಜಿಲ್ಲಾ ಪಂಚಾಯತ್
9. ಎಲ್ಲಾ ಜಿಲ್ಲೆಗಳ ಪೊಲೀಸ್ ವರಿಷ್ಠಾಧಿಕಾರಿಗಳು
10. ಶಾಖಾ ರಕ್ಷಾ ಕಡತ

ಪ್ರತಿಯನ್ನು

1. ಸನ್ಮಾನ್ಯ ಮುಖ್ಯಮಂತ್ರಿಯವರ ಅಪರ ಮುಖ್ಯ ಕಾರ್ಯದರ್ಶಿಗಳು, ವಿಧಾನಸೌಧ, ಬೆಂಗಳೂರು
2. ಮಾನ್ಯ ಗೃಹ ಮಂತ್ರಿಗಳ ಆಪ್ತ ಕಾರ್ಯದರ್ಶಿಗಳು, ವಿಧಾನಸೌಧ, ಬೆಂಗಳೂರು
3. ಮಾನ್ಯ ಸಮಾಜ ಕಲ್ಯಾಣ ಸಚಿವರ ಆಪ್ತ ಕಾರ್ಯದರ್ಶಿಗಳು, ವಿಧಾನಸೌಧ, ಬೆಂಗಳೂರು
4. ಸರ್ಕಾರದ ಅಪರ ಕಾರ್ಯದರ್ಶಿಗಳು, ಸಚಿವ ಸಂಪುಟ, ವಿಧಾನಸೌಧ, ಬೆಂಗಳೂರು
5. ಸರ್ಕಾರದ ಮುಖ್ಯ ಕಾರ್ಯದರ್ಶಿಯವರ ಆಪ್ತ ಕಾರ್ಯದರ್ಶಿಗಳು, ವಿಧಾನಸೌಧ, ಬೆಂಗಳೂರು
6. ಸರ್ಕಾರದ ಪ್ರಧಾನ ಕಾರ್ಯದರ್ಶಿಯವರ ಆಪ್ತ ಸಹಾಯಕರು, ವಿಕಾಸಸೌಧ, ಬೆಂಗಳೂರು

***

Scanned with OKEN Scanner

ಸರ್ಕಾರದ ಆದೇಶ ಸಂಖ್ಯೆ: ಸಕ ಇ /8/ ಎಸ್ಎಲ್ಪಿ/2024, ಬೆಂಗಳೂರು
ದಿನಾಂಕ: 25-8-2025ಕ್ಕೆ ಅನುಬಂಧ-1
ಪ್ರವರ್ಗ- ಎ ರಲ್ಲಿನ ಸಮುದಾಯಗಳು ಮತ್ತುಮೀಸಲಾತಿ ಪ್ರಮಾಣ- ಶೇ.6%

SL.NO	Caste Code	Caste name
1	22	Bhambi ,Bhambhi, Asadaru , Asodi , Chamadia ,Chamar, Chambhar,Chamgar, Haralayya,Harali,Khalpa,Machigor,Mochigar,Madar,Madig, Mochi ,Muchi ,Telegu Mochi ,Kamati Mochi ,Ranigar, Rohidas ,Rohit , Samgar
2	28	Chandala
3	32	Dhor ,Kakkayya ,Kankayya
4	40	Halsar,Haslar ,Hulasvar ,Halasvar
5	42	Hasla
6	48	Kadaiyan
7	50	Kepmaris
8	51	Kolupulvandlu
9	56	Kudumban
10	61	Madiga
11	72	Mang ,Matang ,Minimadig
12	76	Mavilan
13	88	Panchama
14	89	Panniandi
15	93	Samagara
16	94	Samban

ಎಸ್.ವಿ
(ಎಸ್.ವಿ.ಕಲಾವತಿ) 25/08/2025
ಸರ್ಕಾರದ ಜಂಟಿ ಕಾರ್ಯದರ್ಶಿ
ಸಮಾಜ ಕಲ್ಯಾಣ ಇಲಾಖೆ

Scanned with OKEN Scanner

ಸರ್ಕಾರದ ಆದೇಶ ಸಂಖ್ಯೆ: ಸಕ ಇ /8/ ಎಸ್‌ಎಲ್‌ಪಿ/2024,
ಬೆಂಗಳೂರು ದಿನಾಂಕ: 25-8-2025ಕ್ಕೆ ಅನುಬಂಧ-2

ಪ್ರವರ್ಗ- ಬಿ ರಲ್ಲಿನ ಸಮುದಾಯಗಳು ಮತ್ತು ಮೀಸಲಾತಿ ಪ್ರಮಾಣ- ಶೇ.6%

SL.NO	Caste Code	Caste name
1	7	Anamuk
2	8	Aray Mala
3	10	Arwa Mala
4	15	Balagai
5	27	Chalavadi ,Chalvadi ,Channayya
6	86	Pallan
7	44	Holaya ,Holer ,Holeya
8	63	Mahyavanshi ,Dhed ,Vankar, Maru Vankar
9	65	Mala
10	67	Mala Hannai
11	68	Mala Jangam
12	69	Mala Masti
13	70	Mala Sale ,Netkani
14	62	Mahar,Taral ,Dhegu Megu
15	78	Moger
16	80	Mundala
17	90	Paraiyan ,Paraya
18	92	Raneyar
19	101	Valluvan

S.V
(ಎಸ್.ವಿ.ಕಲಾವತಿ) 25/08/2025
ಸರ್ಕಾರದ ಜಂಟಿ ಕಾರ್ಯದರ್ಶಿ
ಸಮಾಜ ಕಲ್ಯಾಣ ಇಲಾಖೆ

Scanned with OKEN Scanner

ಸರ್ಕಾರದ ಆದೇಶ ಸಂಖ್ಯೆ: ಸಕ ಇ /8/ಎಸ್‌ಎಲ್‌ಪಿ/2024, ಬೆಂಗಳೂರು
ದಿನಾಂಕ: 25-8-2025ಕ್ಕೆ ಅನುಬಂಧ-3

ಪ್ರವರ್ಗ- ಸಿ ರಲ್ಲಿನ ಸಮುದಾಯಗಳು ಮತ್ತುಮೀಸಲಾತಿ ಪ್ರಮಾಣ- ಶೇ.5%

SL.NO	Caste Code	Caste name
1	4	Adiya (in Coorg district)
2	5	Ager
3	6	Ajila
4	9	Arunthathiyar
5	11	Baira
6	12	Bakad
7	14	Bakuda
8	16	Bandi
9	13	Bant (in Belgaum, Bijapur, Dharwar and North Kanara districts)
10	17	Banjara ,Lambani ,Lambada ,Lambadi ,Lamani ,Sugali ,Sukali
11	18	Bathada
12	19	Budga Jangam,Beda Jangam,
13	20	Bellara
14	21	Bhangi, ,Mehtar,Olgana,Rukhi ,Malkana Halalkhor ,Lalbegi ,Balmiki ,Korar,Zadmalli
15	23	Bhovi ,Od,Odde ,Vaddar ,Waddar ,Voddar ,Woddar ,Bovi (Non-Besta) ,Kalluvaddar ,Mannuvaddar
16	24	Bindla
17	25	Byagara
18	26	Chakkiliyan
19	29	Chenna Dasar ,Holaya Dasar
20	30	Dakkal ,Dokkalwar
21	31	Dakkaliga
22	33	Dom, Dombara ,Paidi ,Pano
23	34	Ellamalwar,Yellammalawandlu
24	35	Ganti Chores
25	36	Garoda,Garo
26	37	Godda
27	38	Gosangi
28	39	Halleer
29	41	Handi Jogis
30	43	Holar ,Valhar
31	45	Holeya Dasari
32	46	Jaggali

S.V
25/08/2025

Scanned with OKEN Scanner

33	47	Jambuvulu
34	49	Kalladi
35	52	Koosa
36	53	Koracha ,Korachar
37	54	Korama,Korava ,Koravar
38	55	Kotegar ,Metri
39	57	Kuravan
40	58	Lingader
41	59	Machala
42	60	Madari
43	64	Maila
44	66	Mala Dasari
45	71	Mala Sanyasi
46	73	Mang Garudi,Mang Garodi
47	74	Manne
48	75	Masthi
49	77	Meghval ,Menghvar
50	79	Mukri
51	81	Nadia ,Hadi
52	82	Nalkadaya
53	83	Nalakeyava
54	84	Nayadi
55	85	Pale
56	87	Pambada
57	91	Paravan
58	95	Sapari
59	96	Sillekyathas
60	97	Sindhollu ,Chindollu
61	98	Sudugadu Siddha
62	99	Thoti
63	100	Tirgar ,Tirbanda

ಎಸ್.ವಿ
(ಎಸ್.ವಿ.ಕಲಾವತಿ) 25/08/2025
ಸರ್ಕಾರದ ಜಂಟಿ ಕಾರ್ಯದರ್ಶಿ
ಸಮಾಜ ಕಲ್ಯಾಣ ಇಲಾಖೆ

Scanned with OKEN Scanner